**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಸಿ.ಸಿ. ನಂ. 31/2025**

**ಚಾ.ಸಾಃ 3, ಫ್ರಾ.ಸಾಃ 5**

| | |
|---|---|
| ಸಾಕ್ಷಿದಾರನ ಹೆಸರು | ನಿತ್ಯಾನಂದ ನಾಯ್ಕ |
| ತಂದೆಯ ಹೆಸರು | ಗಣಪತಿ ನಾಯ್ಕ |
| ವಯಸ್ಸು | 52 ವರ್ಷ |
| ಉದ್ಯೋಗ | ಆಟೋ ಚಾಲಕ |
| ವಾಸ | ಜಲವಳಕರ್ಕಿ, ತಾಃ ಹೊನ್ನಾವರ |

**ಸಾಕ್ಷಿಯನ್ನು ದಿನಾಂಕಃ 06-02-2026 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ಈಗ್ಗೆ ಒಂದು ವರ್ಷಗಳ ಹಿಂದೆ ನಾನು ತೋಟದಿಂದ ಬರುವಾಗ ರಸ್ತೆಯಲ್ಲಿ ಪೋಲೀಸರು ಒಂದು ಪಚನಾಮೆಗೆ ಸಹಿ ಹಾಕುವಂತೆ ಕೇಳಿ ಸಹಿ ಹಾಕಿಸಿಕೊಂಡು 2 ಫೋಟೋ ತೆಗೆಸಿರುತ್ತಾರೆ. ಆ ಕಾಲಕ್ಕೆ ಚಾಸಾ-2 ಮತ್ತು 6 ಇದ್ದರು. ಸದರಿ ಪಂಚನಾಮೆಯನ್ನು ನೋಡುತ್ತಿದ್ದು ನಿಪಿ-5 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-5(ಸಿ) ಎಂದು ಗುರುತಿಸಲಾಯಿತು. ಆ ಕಾಲಕ್ಕೆ ಇನ್ನೊಂದುದಾಖಲೆಗೆ ನನ್ನ ಸಹಿ ತೆಗೆದುಕೊಂಡಿದ್ದು ಈಗ ಅದನ್ನು ನೋಡುತ್ತಿದ್ದು ಅದು ಹ್ಯಾಶಿಂಗ್ ವರದಿಯಾಗಿದ್ದು ಅದನ್ನು ನಿಪಿ-8 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-8(ಬಿ) ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ತೆಗೆದ 2 ಫೋಟೋಗಳನ್ನು ನೋಡುತ್ತಿದ್ದು ನಿಪಿ-6 ಮತ್ತು 7 ಎಂದು ಗುರುತಿಸಲಾಗಿದೆ. ಯಾವ ಕಾರಣಕ್ಕೆ ಪಂಚನಾಮೆಗೆ ಸಹಿ ಹಾಕಿಸಿಕೊಂಡಿರುತ್ತಾರೆ ನನಗೆ ಗೊತ್ತಿಲ್ಲ. ಪಂಚನಾಮೆಯಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

**(ಈ ಸಂದರ್ಭದಲ್ಲಿ ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀಸವಾಲಿಗೆ ಒಳಪಡಿಸಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು.)**

**ಪಾಟೀಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ,**

ದಿನಾಂಕ 31-10-2024 ರಂದು ಸಂಜೆ 05-00 ರಿಂದ 05-40 ರ ಸಮಯಕ್ಕೆ ಆರೋಪಿತರು ಚಾಸಾ-1 ರವರಿಗೆ ಹಲ್ಲೆ ಮಾಡಿದ ಸ್ಥಳದಲ್ಲಿ ಚಾಸಾ-6 ರವರು ತೋರಿಸಿದ ಸ್ಥಳದಲ್ಲಿ ಪೋಲಿಸರು ನಿಪಿ-5 ರಂತೆ ಸ್ಥಳ ಪಂಚನಾಮೆ ಮಾಡಿ, ನಿಪಿ-6 ಮತ್ತು 7 ರಂತೆ ಫೋಟೋ ತೆಗೆದು ಪಂಚನಾಮೆಯನ್ನು ಓದಿ ಹೇಳಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-5 ರ ವಿಚಾರಗಳು ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲುಃ-1 ರಿಂದ 4 ನೇ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)

ಓ.ಹೇ.ಕೇ. ಸರಿ ಇದೆ.

**Sd/-**

ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ